Akashvani : Bengaluru
National Bulletin In Kannada
15.10.2025 : 7.35 pm
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
*******

< > <*< > < >*> < >
ಮುಖ್ಯಾಂಶಗಳು

೧. ಮಾಜಿ ಸೈನಿಕರು, ಅವರ ಅವಲಂಬಿತರಿಗೆ ನೀಡುವ ಆರ್ಥಿಕ ನೆರವು ದ್ವಿಗುಣಗೊಳಿಸಿದ ಕೇಂದ್ರ ಸರ್ಕಾರ

೨. ಬಿಹಾರ ವಿಧಾನಸಭೆ ಚುನಾವಣೆ: ಅಭ್ಯರ್ಥಿಗಳ ಪಟ್ಟಿ ಬಿಡುಗಡೆಗೊಳಿಸಿದ ಜೆಡಿಯು, ಬಿಜೆಪಿ

೩. ಕೊಪ್ಪಳದಲ್ಲಿ ಕೃಷಿ ಸಂಸ್ಕರಣಾ ಘಟಕದ ತರಬೇತಿ ಕೇಂದ್ರ ಉದ್ಘಾಟಿಸಿದ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್

೪. ಮೂರು ದಿನಗಳ ಭಾರತ ಭೇಟಿಗಾಗಿ ನವದೆಹಲಿಗೆ ಆಗಮಿಸಿದ ಬ್ರೆಜಿಲ್ ಉಪಾಧ್ಯಕ್ಷ

><><><><

ಮಾಜಿ ಸೈನಿಕರ ಕಲ್ಯಾಣ ಇಲಾಖೆ ಜಾರಿಗೆ ತಂದಿರುವ ಯೋಜನೆಗಳ ಅಡಿಯಲ್ಲಿ ಮಾಜಿ ಸೈನಿಕರು ಮತ್ತು ಅವರ ಅವಲಂಬಿತರಿಗೆ ನೀಡುವ ಆರ್ಥಿಕ ನೆರವನ್ನು ನೂರು ಪ್ರತಿಶತ ಹೆಚ್ಚಿಸಲು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅನುಮೋದನೆ ನೀಡಿದ್ದಾರೆ. ಪ್ರತಿ ಫಲಾನುಭವಿಗೆ ಪ್ರತಿ ತಿಂಗಳು ನಾಲ್ಕು ಸಾವಿರ ರೂಪಾಯಿಗಳಿಂದ ಎಂಟು ಸಾವಿರ ರೂಪಾಯಿಗಳಿಗೆ ಅನುದಾನವನ್ನು ದ್ವಿಗುಣಗೊಳಿಸಲಾಗಿದೆ. ಇದು ನಿಯಮಿತ ಆದಾಯವಿಲ್ಲದ ೬೫ ವರ್ಷಕ್ಕಿಂತ ಮೇಲ್ಪಟ್ಟವರು ಹಾಗೂ ಪಿಂಚಣಿ ಪಡೆಯದ ಮಾಜಿ ಸೈನಿಕರು ಮತ್ತು ವಿಧವೆಯರಿಗೆ ನಿರಂತರ ಜೀವಿತಾವಧಿಯ ಬೆಂಬಲವನ್ನು ಒದಗಿಸುತ್ತದೆ. ಎರಡು ಅವಲಂಬಿತ ಮಕ್ಕಳಿಗೆ ಶಿಕ್ಷಣ ಅನುದಾನವನ್ನು ತಲಾ ಒಂದು ಸಾವಿರದಿಂದ ಎರಡು ಸಾವಿರ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. ವಿವಾಹ ಅನುದಾನವನ್ನು ಪ್ರತಿ ಫಲಾನುಭವಿಗೆ ೫೦ ಸಾವಿರದಿಂದ ಒಂದು ಲಕ್ಷಕ್ಕೆ ಹೆಚ್ಚಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಈ ವರ್ಷ ನವೆಂಬರ್ ೧ ರಿಂದ ಸಲ್ಲಿಸಲಾದ ಅರ್ಜಿಗಳಿಗೆ ಪರಿಷ್ಕೃತ ದರಗಳು ಜಾರಿಗೆ ಬರುತ್ತವೆ. ಇದರಿಂದಾಗಿ ವಾರ್ಷಿಕವಾಗಿ ಸರ್ಕಾರದ ಬೊಕ್ಕಸಕ್ಕೆ ಸುಮಾರು ೨೫೭ ಕೋಟಿ ರೂಪಾಯಿಗಳ ಆರ್ಥಿಕ ಹೊರೆ ಬೀಳಲಿದೆ.

><><><><

ಬಿಹಾರ ವಿಧಾನಸಭೆ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ನಂತರ, ಜೆಡಿಯು ಕೂಡ ೫೭ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಅನೇಕ ಹಾಲಿ ಶಾಸಕರು ಮತ್ತು ರಾಜ್ಯ ಸಚಿವರಿಗೆ ಜೆಡಿಯು ಟಿಕೆಟ್ ನೀಡಿದೆ. ರಾಜ್ಯ ಸಂಪುಟದಲ್ಲಿ ಪ್ರಸ್ತುತ ಸೇವೆ ಸಲ್ಲಿಸುತ್ತಿರುವ ಸಚಿವರಿಗೆ ಸ್ಪರ್ಧಿಸಲು ಮತ್ತೊಂದು ಅವಕಾಶ ನೀಡಲಾಗಿದೆ. ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಆಪ್ತ ಮತ್ತು ಗ್ರಾಮೀಣಾಭಿವೃದ್ಧಿ ಸಚಿವ ಶ್ರವಣ್ ಕುಮಾರ್ ನಳಂದದಿಂದ ಸ್ಪರ್ಧಿಸಲಿದ್ದಾರೆ. ಪಕ್ಷದ ಹಿರಿಯ ನಾಯಕ ಮತ್ತು ಜಲಸಂಪನ್ಮೂಲ ಸಚಿವ ವಿಜಯ್ ಕುಮಾರ್ ಚೌಧರಿ ಸರೈರಂಜನ್ ಕ್ಷೇತ್ರದಿಂದ

ಸ್ಪರ್ಧಿಸಲಿದ್ದಾರೆ. ಸಮಾಜ ಕಲ್ಯಾಣ ಸಚಿವ ಮದನ್ ಸಾಹ್ನಿ ಮತ್ತು ಶಿಕ್ಷಣ ಸಚಿವ ಸುನಿಲ್ ಕುಮಾರ್ ಅವರಿಗೆ ಮತ್ತೆ ಟಿಕೆಟ್ ನೀಡಲಾಗಿದೆ. ಏತನ್ಮಧ್ಯೆ, ಮಹ್ನಾರ್ ಕ್ಷೇತ್ರದಿಂದ ನಿನ್ನೆ ನಾಮಪತ್ರ ಸಲ್ಲಿಸಿದ ಜೆಡಿಯು ರಾಜ್ಯ ಅಧ್ಯಕ್ಷ ಉಮೇಶ್ ಕುಶ್ವಾಹ ಅವರ ಹೆಸರನ್ನು ಸಹ ಪಟ್ಟಿಯಲ್ಲಿ ಸೇರಿಸಲಾಗಿದೆ. ಮತ್ತೊಬ್ಬ ಸಚಿವ ಮಹೇಶ್ವರ್ ಹಜಾರಿ ಅವರು ಸಮಷ್ಟಿಪುರ ಜಿಲ್ಲೆಯ ಕಲ್ಯಾಣಪುರದಿಂದ ಸ್ಪರ್ಧಿಸಲಿದ್ದಾರೆ. ಮಾಜಿ ಸಂಸದೆ ಅಶ್ವಮೇಧ ದೇವಿಗೆ ಸಮಷ್ಟಿಪುರ ವಿಧಾನಸಭಾ ಕ್ಷೇತ್ರದಿಂದ ಟಿಕೆಟ್ ನೀಡಲಾಗಿದೆ.

><><><><

ಮುಂಬರುವ ಬಿಹಾರ ಚುನಾವಣೆಗೆ ಬಿಜೆಪಿ ೧೨ ಅಭ್ಯರ್ಥಿಗಳ ಎರಡನೇ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಗಾಯಕಿ ಮೈಥಿಲಿ ಠಾಕೂರ್, ಅಲಿನಗರ ಕ್ಷೇತ್ರದಿಂದ ಮತ್ತು ಮಾಜಿ ಐಪಿಎಸ್ ಅಧಿಕಾರಿ ಆನಂದ್ ಮಿಶ್ರಾ, ಬಕ್ಸಾರ್ ಕ್ಷೇತ್ರದಿಂದ ಸ್ಪರ್ಧಿಸುತ್ತಿದ್ದಾರೆ. ಡಾ. ಸಿಯಾರಾಮ್ ಸಿಂಗ್, ಬರ್ಹ್ ಕ್ಷೇತ್ರದಿಂದ ಮತ್ತು ಮಹೇಶ್ ಪಾಸ್ವಾನ್, ಅಗಿಯಾನ್ ಕ್ಷೇತ್ರದಿಂದ ಕಣಕ್ಕಿಳಿಯಲಿದ್ದಾರೆ. ಇದರೊಂದಿಗೆ ಬಿಜೆಪಿ, ಇಲ್ಲಿಯವರೆಗೆ ೮೩ ಅಭ್ಯರ್ಥಿಗಳ ಹೆಸರನ್ನು ಘೋಷಿಸಿದೆ.

><><><><

ಕೊಪ್ಪಳ ಜಿಲ್ಲೆಯ ಮೆತ್ತಗಲ್ಲ ಗ್ರಾಮದಲ್ಲಿ ಕೃಷಿ ಸಂಸ್ಕರಣಾ ಘಟಕದ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರವನ್ನು ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪ್ರಧಾನ ಮಂತ್ರಿ ಧನ ದಾನ್ಯ ಯೋಜನೆಯಡಿ ಕೊಪ್ಪಳ ಜಿಲ್ಲೆ ಆಯ್ಕೆಯಾಗಿದೆ ಎಂದು ಹೇಳಿದರು.

ಧ್ವನಿ: ನಿರ್ಮಲ ಸೀತಾರಾಮನ್ ( ಸೆಕೆಂಡ್)

ಗಂಗಾವತಿ ಶಾಸಕ ಗಾಲಿ ಜನಾರ್ಧನ ರೆಡ್ಡಿ ಮಾತನಾಡಿ, ಅಂಜನಾದ್ರಿ ಬೆಟ್ಟದ ಅಭಿವೃದ್ಧಿಗೆ ೧೩ ಕೋಟಿ ರೂಪಾಯಿ ಅನುದಾನ ನೀಡುವಂತೆ ಇದೇ ವೇಳೆ ಕೇಂದ್ರ ಹಣಕಾಸು ಸಚಿವರಿಗೆ ಮನವಿ ಮಾಡಿದರು.

><><><><

ಬ್ರೆಜಿಲ್ ಉಪಾಧ್ಯಕ್ಷ ಜೆರಾಲ್ಡೊ ಅಲ್ಕ್ಮಿನ್ ಅವರು ಮೂರು ದಿನಗಳ ಭಾರತ ಭೇಟಿಗಾಗಿ ಇಂದು ಮಧ್ಯಾಹ್ನ ನವದೆಹಲಿಗೆ ತಲುಪಿದರು. ಅವರು ನಾಳೆ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರೊಂದಿಗೆ ಸಭೆ ನಡೆಸಲಿದ್ದಾರೆ. ಭೇಟಿಯ ಸಮಯದಲ್ಲಿ, ಅಲ್ಕ್ಮಿನ್ ಅವರು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ರಕ್ಷಣಾ ಸಚಿವ ರಾಜನಾಥ್ ಸಿಂಗ್, ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಹಾಗೂ ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಪುರಿ ಅವರನ್ನು ಭೇಟಿ ಮಾಡಿ, ಪರಸ್ಪರ ಆಸಕ್ತಿಯ ವಿವಿಧ ವಿಷಯಗಳ ಬಗ್ಗೆ ಚರ್ಚಿಸಲಿದ್ದಾರೆ.

><><><><

ಪಶ್ಚಿಮ ಬಂಗಾಳದ ದುರ್ಗಾಪುರದಲ್ಲಿ ಸಾಮೂಹಿಕ ಅತ್ಯಾಚಾರಕ್ಕೆ ಒಳಗಾದ ವೈದ್ಯಕೀಯ ವಿದ್ಯಾರ್ಥಿನಿಯ ಸಹಪಾಠಿಗೆ ದುರ್ಗಾಪುರ ನ್ಯಾಯಾಲಯ ಇಂದು ಏಳು ದಿನಗಳ ಪೊಲೀಸ್ ವಶಕ್ಕೆ ಆದೇಶಿಸಿದೆ. ಈ ಪ್ರಕರಣದಲ್ಲಿ ಇದುವರೆಗೆ ಒಟ್ಟು ಆರು ಜನರನ್ನು ಪೊಲೀಸರು ಬಂಧಿಸಿದ್ದಾರೆ. ಇದಕ್ಕೂ ಮೊದಲು ಇತರೆ ಐದು ಆರೋಪಿಗಳನ್ನು ನ್ಯಾಯಾಲಯ ಪೊಲೀಸ್ ವಶಕ್ಕೆ ನೀಡಿದೆ. ಒಡಿಶಾ

ಮೂಲದ ಸಂತ್ರಸ್ತೆ ಪಶ್ಚಿಮ ಬಂಗಾಳದ, ಪಶ್ಚಿಮ ಬರ್ಧಮಾನ್ ಜಿಲ್ಲೆಯ ದುರ್ಗಾಪುರದಲ್ಲಿರುವ ಖಾಸಗಿ ವೈದ್ಯಕೀಯ ಕಾಲೇಜಿನ ಎರಡನೇ ವರ್ಷದ ಎಂಬಿಬಿಎಸ್ ವಿದ್ಯಾರ್ಥಿನಿಯಾಗಿದ್ದು, ಅಕ್ಟೋಬರ್ ೧೦ ರ ರಾತ್ರಿ ಕಾಲೇಜು ಕ್ಯಾಂಪಸ್ ಬಳಿ ಆಕೆಯ ಮೇಲೆ ಸಾಮೂಹಿಕ ಅತ್ಯಾಚಾರ ನಡೆದಿದೆ ಎಂದು ಆರೋಪಿಸಲಾಗಿದೆ.

><><><><

ಮಹಾರಾಷ್ಟ್ರದಲ್ಲಿ, ೬೧ ನಕ್ಸಲರು ಇಂದು ಗಡ್ಚಿರೋಲಿ ಪೊಲೀಸರ ಮುಂದೆ ಮತ್ತು ಮುಖ್ಯಮಂತ್ರಿದೇವೇಂದ್ರ ಫಡ್ನವೀಸ್ ಅವರ ಸಮ್ಮುಖದಲ್ಲಿ ಶರಣಾದರು. ಕೇಂದ್ರ ನಕ್ಸಲ್ ಸಮಿತಿಯ ಪೊಲಿಟ್ ಬ್ಯೂರೋ ಸದಸ್ಯ ಮಲ್ಲುಜೋಳ ವೇಣುಗೋಪಾಲ್ ರಾವ್ ಅಲಿಯಾಸ್ ಭೂಪತಿ, ಗಡ್ಚಿರೋಲಿಯಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ ಇತರೆ ೬೦ ನಕ್ಸಲರು ನಕ್ಸಲರೊಂದಿಗೆ ಶರಣಾಗಿದ್ದಾರೆ. ಈ ಎಲ್ಲಾ ೬೧ ನಕ್ಸಲರ ಬಂಧನಕ್ಕೆ ೬ ಕೋಟಿ ರೂಪಾಯಿಗಳ ಸಾಮೂಹಿಕ ಬಹುಮಾನ ಘೋಷಿಸಲಾಗಿತ್ತು.

><><><><

ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯಲ್ಲಿ ಇಂದು ಇಪ್ಪತ್ತೇಳು ಮಾವೋವಾದಿಗಳು ಶರಣಾಗಿದ್ದಾರೆ. ಅವರಲ್ಲಿ ಹತ್ತು ಮಹಿಳಾ ಮಾವೋವಾದಿಗಳು ಸೇರಿದ್ದಾರೆ. ಶರಣಾದ ಈ ಹದಿನಾರು ನಕ್ಸಲರ ಬಂಧನಕ್ಕೆ ಒಟ್ಟು ಐವತ್ತು ಲಕ್ಷ ರೂಪಾಯಿಗಳ ಬಹುಮಾನ ಘೋಷಿಸಲಾಗಿತ್ತು. ರಾಜ್ಯ ಪೊಲೀಸ್ ಮತ್ತು ಕೇಂದ್ರ ಮೀಸಲು ಪೊಲೀಸ್ ಪಡೆಯ ಇತರೆ ಹಿರಿಯ ಅಧಿಕಾರಿಗಳ ಮುಂದೆ ಅವರು ಶಸ್ತ್ರಾಸ್ತ್ರಗಳನ್ನು ಒಪ್ಪಿಸಿದರು. ಛತ್ತೀಸ್‌ಗಢ ಸರ್ಕಾರದ ಪುನರ್ವಸತಿ ನೀತಿಯಡಿಯಲ್ಲಿ ಶರಣಾದ ಪ್ರತಿಯೊಬ್ಬ ಮಾವೋವಾದಿಗೂ ಐವತ್ತು ಸಾವಿರ ರೂಪಾಯಿಗಳ ಪ್ರೋತ್ಸಾಹ ಧನ ಮತ್ತು ಇತರೆ ಸೌಲಭ್ಯಗಳನ್ನು ನೀಡಲಾಗುತ್ತದೆ.

><><><><

ಬಿ.ಆರ್. ಚೋಪ್ರಾ ಅವರ ಪ್ರಸಿದ್ಧ ಟಿವಿ ಧಾರಾವಾಹಿ ಮಹಾಭಾರತದಲ್ಲಿ ಕರ್ಣನ ಪಾತ್ರದಲ್ಲಿ ಹೆಸರುವಾಸಿಯಾಗಿದ್ದ ಹಿರಿಯ ನಟ ಪಂಕಜ್ ಧೀರ್, ಕ್ಯಾನ್ಸರ್‌ನಿಂದಾಗಿ ತಮ್ಮ ೬೮ ನೇ ವಯಸ್ಸಿನಲ್ಲಿ ಮುಂಬೈನಲ್ಲಿ ಇಂದು ನಿಧನರಾಗಿದ್ದಾರೆ.

><><><><

ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನ ನಡುವಿನ ಗಡಿ ಘರ್ಷಣೆಗಳ ಬಗ್ಗೆ ವಿಶ್ವಸಂಸ್ಥೆ ಕಳವಳ ವ್ಯಕ್ತಪಡಿಸಿದೆ. ಅಫ್ಘಾನಿಸ್ತಾನದಲ್ಲಿ ಮಾನವ ಹಕ್ಕುಗಳ ಕುರಿತಾದ ವಿಶ್ವಸಂಸ್ಥೆಯ ವಿಶೇಷ ವರದಿಗಾರ ರಿಚರ್ಡ್ ಬೆನೆಟ್, ಹಲವಾರು ನಾಗರಿಕ ಸಾವು-ನೋವುಗಳು ಮತ್ತು ಹೋರಾಟದಿಂದಾಗಿ ಜನರು ತಮ್ಮ ಮನೆಗಳನ್ನು ತೊರೆಯಬೇಕಾದ ಪರಿಸ್ಥಿತಿಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಗರಿಷ್ಠ ಸಂಯಮವನ್ನು ಬಳಸಲು, ನಾಗರಿಕರನ್ನು ರಕ್ಷಿಸಲು ಮತ್ತು ಅಂತಾರಾಷ್ಟ್ರೀಯ ಕಾನೂನನ್ನು ಅನುಸರಿಸಲು ಅವರು ಎರಡೂ ಕಡೆಯವರಿಗೆ ಕರೆ ನೀಡಿದರು. ಅಫ್ಘಾನಿಸ್ತಾನದ ಕಂದಹಾರ್ ಪ್ರಾಂತ್ಯದ ಸ್ಪಿನ್ ಬೋಲ್ಡಕ್ ಜಿಲ್ಲೆಯಲ್ಲಿ ಇಂದು ಬೆಳಗ್ಗೆ ಸಂಭವಿಸಿದ ಘರ್ಷಣೆಯ ನಂತರ ಈ ಎಚ್ಚರಿಕೆ ನೀಡಲಾಗಿದೆ. ಈ ದಾಳಿಯಲ್ಲಿ ಕನಿಷ್ಠ ೧೨ ಅಫ್ಘಾನ್ ನಾಗರಿಕರು ಸಾವನ್ನಪ್ಪಿದ್ದು, ೧೦೦ ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ.

><><><><

ಕೊಲಂಬೊದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ ಇಂಗ್ಲೆಂಡ್ ಹಾಗೂ ಪಾಕಿಸ್ತಾನ ವನಿತೆಯರ ತಂಡಗಳು ಮುಖಾಮುಖಿಯಾಗಿವೆ. ಮೊದಲು ಬ್ಯಾಟಿಂಗ್ ಮಾಡುತ್ತಿರುವ ಇಂಗ್ಲೆಂಡ್, ೨೫ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೭೯ ರನ್ ಮಾಡಿದೆ. ಮಳೆ ಹಿನ್ನೆಲೆಯಲ್ಲಿ ಪಂದ್ಯ ಸ್ಥಗಿತಗೊಂಡಿದೆ.

><><><><

ಭಾರತೀಯ ನೌಕಾಪಡೆಯು ನಾಳೆ ನವದೆಹಲಿಯಲ್ಲಿ ಕಡಲ ವಲಯದ ಮೇಲೆ ಸೈಬರ್ ದಾಳಿಯ ಪರಿಣಾಮ ಹಾಗೂ ರಾಷ್ಟ್ರೀಯ ಭದ್ರತೆ ಮತ್ತು ಅಂತಾರಾಷ್ಟ್ರೀಯ ಸಂಬಂಧಗಳ ಮೇಲೆ ಅದರ ಪರಿಣಾಮಗಳ ಕುರಿತು ವಿಚಾರ ಸಂಕಿರಣವನ್ನು ಆಯೋಜಿಸಲಿದೆ. ಈ ವಿಚಾರ ಸಂಕಿರಣ, ಕಡಲ ಕ್ಷೇತ್ರದಲ್ಲಿ ಸೈಬರ್ ಬೆದರಿಕೆಗಳ ತಿಳುವಳಿಕೆಯನ್ನು ಆಳಗೊಳಿಸುವುದು ಹಾಗೂ ಸೈಬರ್ ಸುರಕ್ಷತೆಯನ್ನು ಹೆಚ್ಚಿಸಲು ಮತ್ತು ರಾಷ್ಟ್ರೀಯ ಸೈಬರ್ ಭದ್ರತಾ ನಿಲುವನ್ನು ಬಲಪಡಿಸಲು ಪ್ರಮುಖ ಪಾಲುದಾರರ ನಡುವೆ ಸಹಯೋಗವನ್ನು ಬೆಳೆಸುವ ಗುರಿಯನ್ನು ಹೊಂದಿದೆ. ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದ ರಾಜ್ಯ ಸಚಿವ ಜಿತಿನ್ ಪ್ರಸಾದ್, ಉದ್ಘಾಟನಾ ಅಧಿವೇಶನದಲ್ಲಿ ಮುಖ್ಯ ಭಾಷಣ ಮಾಡಲಿದ್ದಾರೆ. ಈ ವಿಚಾರ ಸಂಕಿರಣ, ಮಹಾಸಾಗರದಾದ್ಯಂತ ಭದ್ರತೆ ಮತ್ತು ಬೆಳವಣಿಗೆಗೆ ಪರಸ್ಪರ ಮತ್ತು ಸಮಗ್ರ ಪ್ರಗತಿಯನ್ನು ಮುನ್ನಡೆಸುವ ಗುರಿಯನ್ನು ಹೊಂದಿದೆ.

><><><><

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೫೭೫ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೨ ಸಾವಿರದ ೬೦೫ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೧೭೮ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೫ ಸಾವಿರದ ೩೨೪ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೮ ರೂಪಾಯಿ ೬ ಪೈಸೆಯಷ್ಟಾಗಿದೆ.

><><><><